**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.**

**ಸಿಸಿ .1157/2023**

| | | | |
|---|---|---|---|
| **ಸಾಕ್ಷಿದಾರರ ಹೆಸರು** | - ಸಂಜಯ್ | | **ಚಾ.ಸಾ.-9** |
| **ತಂದೆ/ಗಂಡನ ಹೆಸರು** | - ದೊಡ್ಡೋಣು | | **ಫ್ರಾ.ಸಾ.-2** |
| **ವಯಸ್ಸು** | - 24 ವರ್ಷ | | |
| **ಉದ್ಯೋಗ** | - ಎಳೆನೀರು ವ್ಯಾಪಾರ | | |
| **ವಾಸಸ್ಥಳ** | - ಬೂದಗುಪ್ಪೆ | | |

ದಿನಾಂಕಃ 16-06-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ**

ಸಾಕ್ಷಿಗೆ ಎರಡು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ, ಸದರೀ ದಾಖಲೆ ಸ್ಥಳ ಮಹಜರ್ ಮತ್ತು ಅಮಾನತ್ತು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿ.ಪಿ. 3 ಮತ್ತು 2 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಗಳನ್ನು ನಿ.ಪಿ. 2 ಬಿ ಮತ್ತು 3 ಬಿ ಎಂದು ಗುರುತಿಸಲಾಯಿತು. ನಿಪಿ-2 ಮತ್ತು 3 ರ ದಾಖಲೆಗಳಿಗೆ ಸುಮಾರು 3 ವರ್ಷಗಳ ಹಿಂದೆ ನಮ್ಮ ಗ್ರಾಮದಲ್ಲಿ ಪೋಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ನಿ.ಪಿ. 2 ಮತ್ತು 3 ರಲ್ಲಿ ಪೋಲೀಸರು ಏನು ಬರೆದಿದ್ದಾರೆಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ನಿ.ಪಿ.2 ಮತ್ತು 3 ದಾಖಲೆಗಳಿಗೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆಂದು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಮಹಜರ್ ಕ್ರಮಗಳನ್ನು ಜರುಗಿಸುವ ಮೂಲಕ ಯಾವುದೇ ವಾಹನವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

**( ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿ ನೀಡಲಾಯಿತು. )**

**ಪಾಟೀ ಸವಾಲುಃ ಮಾನ್ಯ ಎ ಪಿ ಪಿ ರವರಿಂದ**

ದಿನಾಂಕಃ 19-05-2023 ರಂದು ಮದ್ದೂರು ಚನ್ನಸಂದ್ರ ರಸ್ತೆಯ ಚನ್ನಸಂದ್ರ ಗ್ರಾಮದ ಶಿವರಾಮು ರವರ ಜಮೀನಿನ ನೇರದ ರಸ್ತೆಯಲ್ಲಿ ಮಧ್ಯಾಹ್ನ 02-00 ರಿಂದ 02-50 ಗಂಟೆಯವರೆಗೆ ಚಾ,ಸಾ. 1 ರವರು ತೋರಿಸಿದ ಕೃತ್ಯ ನಡೆದ ಸ್ಥಳದಲ್ಲಿ ನನ್ನ ಮತ್ತು ಚಾ.ಸಾ. 10 ರವರ ಸಮಕ್ಷಮ ನಿ.ಪಿ. 3 ರಂತೆ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ಮಧ್ಯಾಹ್ನ 03-20 ರಿಂದ 04-00 ರವರೆಗೆ ಮದ್ದೂರು ಪೊಲೀಸ್ ಠಾಣಾ ಆವರಣದಲ್ಲಿ ನನ್ನ ಹಾಗೂ ಚಾಸಾ-10 ರವರ ಸಮಕ್ಷಮ ಅಪಘಾತಕ್ಕೀಡಾದ ಬೈಕ್ ನಂಃ ಕೆಎ-11 ಇಹೆಚ್ -1480 ಬೈಕ್ ನ್ನು ನಿಪಿ-2 ರಂತೆ ಅಮಾನತ್ತು ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ. 3 ಮತ್ತು 2 ರಲ್ಲಿರುವ ಎಲ್ಲಾ ವಿಚಾರಗಳು ನಿಮಗೆ ಗೊತ್ತಿದ್ದರೂ, ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ವಕೀಲರು ಪಾಟೀಸವಾಲು ಏನು ಇಲ್ಲ ಎಂದು ತಿಳಿಸಿರುತ್ತಾರೆ**

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ನ್ಯಾಯಾಧೀಶರು
ಸಾಕ್ಷಿ ಸಹಿ ಮತ್ತು ಜೆ ಎಂ ಎಫ್ ಸಿ , ಮದ್ದೂರು.